<u>All India Radio: Bangalore</u>
<u>Regional Bulletin In Kannada</u>

<u>ಆಕಾಶವಾಣಿ ಬೆಂಗಳೂರು</u>

<u>ಪ್ರದೇಶ ಸಮಾಚಾರ</u>

03.03.2026 6.40 p.m.

****************

<u>ಮುಖ್ಯಾಂಶಗಳು</u>

- ಆಲಮಟ್ಟಿ ಅಣೆಕಟ್ಟು ಎತ್ತರ ಹೆಚ್ಚಿಸುವ ವಿಚಾರ; ಕೇಂದ್ರ ಸರ್ಕಾರ ಮಧ್ಯಪ್ರವೇಶ ಮಾಡುವಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮನವಿ
- ಎರಡು ಸಾವಿರದ 901 ಕೋಟಿ ರೂಪಾಯಿ ಮೌಲ್ಯದ 6 ಸುಧಾರಿತ ಲಘು ಹೆಲಿಕಾಪ್ಟರ್ ನೀಡಲು ರಕ್ಷಣಾ ಸಚಿವಾಲಯದೊಂದಿಗೆ ಎಚ್‌ಎಎಲ್ ಒಪ್ಪಂದ
- ಹೋಳಿ–ರಂಜಾನ್ ಹಬ್ಬದ ಹಿನ್ನೆಲೆ; ಹುಬ್ಬಳ್ಳಿಯಲ್ಲಿ ಶಾಂತಿ ಕಾಪಾಡುವಂತೆ ಪೊಲೀಸ್ ಇಲಾಖೆ ಮನವಿ
- ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐದು ಐಪಿಎಲ್ ಪಂದ್ಯ ಆಡಲು ಆರ್‌ಸಿಬಿ ಒಪ್ಪಿಗೆ

****************

ಆಲಮಟ್ಟಿ ಅಣೆಕಟ್ಟು ಎತ್ತರ ಹೆಚ್ಚಿಸುವ ವಿವಾದ ಕುರಿತಂತೆ ಕೇಂದ್ರ ಸರ್ಕಾರ ಮಧ್ಯಪ್ರವೇಶ ಮಾಡಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಒತ್ತಾಯಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಚಾರದಲ್ಲಿ ರಾಜ್ಯದ ಸಂಸದರು, ಕೇಂದ್ರ ಸಚಿವರು ಪ್ರಧಾನಿಯವರನ್ನು ಒತ್ತಾಯಿಸಬೇಕು ಎಂದು ಹೇಳಿದ್ದಾರೆ.

ಆಂಧ್ರ–ತೆಲಂಗಾಣ ರಾಜ್ಯಗಳು ಆಲಮಟ್ಟಿ ವಿಚಾರದಲ್ಲಿ ಮೂಗು ತೂರಿಸಬಾರದು ಎಂದು ತಿಳಿಸಿದ್ದಾರೆ.

ರಾಜ್ಯಕ್ಕೆ ನಿಗದಿಯಾದ ನೀರಿನ ಬಳಕೆಗೆ ಅವಕಾಶ ನೀಡುವಂತೆ ಆಗ್ರಹಿಸಿದ್ದಾರೆ.

ಇದೇ ವೇಳೆ, ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ನಡುವಿನ ಸಂಬಂಧ ಹಾಲು–ಜೇನಿನಂತೆ ತಿಳಿಸಿದ್ದಾರೆ.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರಸ್ತಾಪಿಸಿರುವ ಫೋನ್ ಕದ್ದಾಲಿಕೆ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ನಾಯಕತ್ವವನ್ನು ಅಸ್ಥಿರಗೊಳಿಸುವ ಕುರಿತಂತೆ ತಾವು ಮಾತನಾಡಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

****************

ಭಾರತೀಯ ಕರಾವಳಿ ಕಾವಲು ಪಡೆಗಾಗಿ ಆರು ಸುಧಾರಿತ ಲಘು ಹೆಲಿಕಾಪ್ಟರ್‌ಗಳು ಮತ್ತು ಭಾರತೀಯ ನೌಕಾಪಡೆಗಾಗಿ ಭೂಮಿಯಿಂದ ಆಕಾಶಕ್ಕೆ ಚಿಮ್ಮುವ ಶ್ಟಿಲ್ ಕ್ಷಿಪಣಿ ಕುರಿತಂತೆ ರಕ್ಷಣಾ ಸಚಿವಾಲಯ ಇಂದು ಒಟ್ಟು ಐದು ಸಾವಿರದ 83 ಕೋಟಿ ರೂಪಾಯಿಗಳ ಒಪ್ಪಂದಗಳಿಗೆ ಸಹಿ ಹಾಕಿದೆ.

2 ಸಾವಿರದ 901 ಕೋಟಿ ರೂಪಾಯಿ ಮೌಲ್ಯದ ಈ ಸುಧಾರಿತ ಹಗುರ ಹೆಲಿಕಾಪ್ಟರ್‌ಗಳ ಒಪ್ಪಂದವನ್ನು ಬೆಂಗಳೂರಿನ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್– ಎಚ್‌ಎಎಲ್ ನೊಂದಿಗೆ ಸಹಿ ಮಾಡಲಾಗಿದೆ.

ರಕ್ಷಣೆ, ಕಡಲಾಚೆಯ ಸ್ಥಾಪನೆಗಳು ಮತ್ತು ಮೀನುಗಾರರು ಮತ್ತು ಸಮುದ್ರ ಪರಿಸರದ ರಕ್ಷಣೆಯ ಕರ್ತವ್ಯಗಳನ್ನು ಪೂರೈಸುವ ಭಾರತೀಯ ಕರಾವಳಿ ಕಾವಲು ಪಡೆಯ ಸಾಮರ್ಥ್ಯವನ್ನು ಇದು ಗಮನಾರ್ಹವಾಗಿ ಹೆಚ್ಚಿಸಲಿದೆ.

****************

ಹೋಳಿ ಹುಣ್ಣಿಮೆ ಹಾಗೂ ರಂಜಾನ್ ಹಬ್ಬದ ಹಿನ್ನೆಲೆಯಲ್ಲಿ ಹುಬ್ಬಳ್ಳಿ ಧಾರವಾಡ ಪೊಲೀಸ್ ಕಮೀಷನರೇಟ್ ವತಿಯಿಂದ ಸೌಹಾರ್ದ ಸಭೆ ನಡೆಯಿತು.

ವಿವಿಧ ಧರ್ಮಗಳ ನಡುವೆ ಸೌಹಾರ್ದ ಮತ್ತು ಭ್ರಾತೃತ್ವ ಬೆಳೆಸುವ ಉದ್ದೇಶದಿಂದ ನಡೆದ ಈ ಸಭೆಯಲ್ಲಿ ಮೂರುಸಾವಿರಮಠದ ಜಗದ್ಗುರುಗಳು, ಮುಸ್ಲಿಂ ಧರ್ಮಗುರು ತಾಜುದ್ದೀನ ಪೀರಾ, ಅಲ್ಲದೇ ಕ್ರಿಶ್ಚಿಯನ್, ಸಿಖ್ ಧರ್ಮಗುರುಗಳು ಭಾಗವಹಿಸಿದ್ದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಕಮಿಷನರ್ ಎನ್.ಶಶಿಕುಮಾರ್ ಎಲ್ಲರೂ ಪರಸ್ಪರ ಸಹಕರಿಸಿ ಉತ್ತಮ ಬಾಂಧವ್ಯದಿಂದ ಸಮಾಜದಲ್ಲಿ ಬದುಕಬೇಕು ಎಂದು ಮನವಿ ಮಾಡಿದ್ದಾರೆ. ಶಾಂತಿ, ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆಗೆ ಸಹಕರಿಸುವಂತೆ ಕೋರಿದ್ದಾರೆ.

ಬೈಟ್: ಕಮಿಷನರ್ ಎನ್.ಶಶಿಕುಮಾರ್ ( 30 ಸೆಕೆಂಡ್ಸ್)

****************

ಕಲಬುರಗಿಯ ಮಹದೇವಪ್ಪ ರಾಂಪುರೆ ವೈದ್ಯಕೀಯ ಕಾಲೇಜಿನಲ್ಲಿ ನಡೆದ ಸಹಾಯ ಧನ ಹಗರಣಕ್ಕೆ ಸಂಬಂಧಿಸಿದಂತೆ ಇಬ್ಬರು ಆರೋಪಿಗಳ ವಿರುದ್ಧ ಜಾರಿ ನಿರ್ದೇಶನಾಲಯ ಆರೋಪ ಪಟ್ಟಿ ಸಲ್ಲಿಸಿದೆ.

ಆರೋಪಿಗಳಾದ ಭೀಮಾಶಂಕರ್ ಬಿಲ್ಗುಂಡಿ ಮತ್ತು ಮಲ್ಲಣ್ಣ ಎಸ್.ಮದ್ದಾರ್ಕಿ ವಿರುದ್ಧ ಮಂಗಳೂರಿನ ಪಿಎಂಎಲ್ಎ ಪ್ರಕರಣಗಳ ವಿಶೇಷ ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಸಿದೆ.

2018 ಮತ್ತು 2024ರ ನಡುವಿನ ಅವಧಿಯಲ್ಲಿ ಮಹದೇವಪ್ಪ ರಾಂಪುರೆ ವೈದ್ಯಕೀಯ ಕಾಲೇಜಿನಲ್ಲಿ ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳಿಗೆ ಮೀಸಲಾದ ಹಣವನ್ನು ವಂಚಿಸಲಾಗಿತ್ತು.

****************

ದುಬೈನಲ್ಲಿ ಸಿಲುಕಿರುವ ಕನ್ನಡಿಗರೊಂದಿಗೆ ಇಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ದೂರವಾಣಿ ಮೂಲಕ ಮಾತುಕತೆ ನಡೆಸಿ, ಧೈರ್ಯ ತುಂಬಿದರು.

ಈ ವೇಳೆ, ಯುಎಇ ಯಲ್ಲಿರುವ ಕನ್ನಡಿಗರ ಸುರಕ್ಷತೆಗಾಗಿ ಕೇಂದ್ರದೊಂದಿಗೆ ಮಾತುಕತೆ ನಡೆಸಲಾಗುವುದು ಎಂದು ಭರವಸೆ ನೀಡಿದ್ದಾರೆ.

61 ಮಂದಿ ಕನ್ನಡಿಗರು ಪ್ರಶಸ್ತಿ ಸ್ವೀಕರಿಸಲು ದುಬೈಗೆ ತೆರಳಿದ್ದು, ಅಲ್ಲಿಯೇ ತಂಗಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

****************

ಬೆಂಗಳೂರು ನಗರ ಅಪರಾಧ ವಿಭಾಗದ ಮಾದಕ ದ್ರವ್ಯ ವಿರೋಧಿ ಘಟಕದ ಪೊಲೀಸರು ಇಂದು ಇಬ್ಬರು ಮಾದಕ ದ್ರವ್ಯ ಮಾರಾಟಗಾರರನ್ನು ಬಂಧಿಸಿದ್ದಾರೆ.

ಬಂಧಿತರಿಂದ ಹತ್ತು ಕೋಟಿ ರೂಪಾಯಿ ಮೌಲ್ಯದ ಮಾದಕ ದ್ರವ್ಯ ವಶಪಡಿಸಿಕೊಳ್ಳಲಾಗಿದೆ. ಪೊಲೀಸರು, 174 ಕಿಲೋ ಗ್ರಾಂಗಳಷ್ಟು ತೂಕದ 8 ಸಾವಿರದ 335 ಎಲ್ಎಸ್‌ಟಿ ಪಟ್ಟಿಗಳು 2 ಮೊಬೈಲ್ ಫೋನ್‌ಗಳು ಮತ್ತು ಒಂದು ದ್ವಿಚಕ್ರ ವಾಹನ ವಶಪಡಿಸಿಕೊಂಡಿದ್ದಾರೆ.

****************

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐದು ಪಂದ್ಯಗಳನ್ನು ನಡೆಸಲು ಆರ್‌ಸಿಬಿ ಒಪ್ಪಿಗೆ ಸೂಚಿಸಿದೆ.

ಉದ್ಘಾಟನಾ ಪಂದ್ಯವು ಬೆಂಗಳೂರಿನಲ್ಲಿ ನಿಗದಿಯಾಗಿದೆ. ಉಳಿದ ಎರಡು ಪಂದ್ಯಗಳನ್ನು ರಾಯ್‌ಪುರದ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

ಕಳೆದ ವರ್ಷ ನಡೆದ ದುರಂತದ ಬಳಿಕ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಒಂದು ಕ್ರಿಕೆಟ್ ಪಂದ್ಯವು ನಡೆದಿರಲಿಲ್ಲ. ಇದೀಗ ಆರ್‌ಸಿಬಿ ಫ್ರಾಂಚೈಸಿಯ ಎಲ್ಲಾ ಬೇಡಿಕೆಗಳು ಹಾಗೂ ರಾಜ್ಯ ಸರ್ಕಾರದ ಎಲ್ಲಾ ಆದೇಶಗಳನ್ನು ಕೆಎಸ್‌ಸಿಎ ಸಂಪೂರ್ಣವಾಗಿ ಪಾಲಿಸಿರುವುದರಿಂದ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಮತ್ತೆ ಕ್ರಿಕೆಟ್ ಪಂದ್ಯ ಆಯೋಜಿಸಲಾಗುತ್ತಿದೆ. ಇದು ಅಭಿಮಾನಿಗಳಲ್ಲಿ ಸಂತಸ ಹೆಚ್ಚಿಸಿದೆ.

****************

ವಿಜಯಪುರ ಜಿಲ್ಲೆಯಲ್ಲಿ ನೀರಾವರಿ ಕ್ರಾಂತಿಯ ಬಳಿಕ ಈಗ ಶೈಕ್ಷಣಿಕ ಕ್ರಾಂತಿ ಮಾಡಲಾಗುತ್ತಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ಕಾರಜೋಳ ಗ್ರಾಮದಲ್ಲಿ ವಿವಿಧ ಯೋಜನೆಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕಾಲುವೆಗಳ ವ್ಯಾಪ್ತಿಯಲ್ಲಿ ಬರುವ 156 ಹಳ್ಳಗಳಿಗೆ ನೀರು ತುಂಬಿಸುವ ಯೋಜನೆ ರೂಪಿಸಲಾಗಿದೆ ಎಂದು ಹೇಳಿದ್ದಾರೆ.

ರೈತರು, ಕೂಲಿ ಕಾರ್ಮಿಕರು, ಬಡವರ ಮಕ್ಕಳು ಉನ್ನತ ಶಿಕ್ಷಣ ಪಡೆದು ಅಭಿವೃದ್ಧಿಯಾಗಲಿ ಎಂಬುದು ಸರ್ಕಾರದ ಆಶಯವಾಗಿದೆ ಎಂದು ತಿಳಿಸಿದ್ದಾರೆ.

****************

ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ– ನಿಮ್ಹಾನ್ಸ್, ಮನೋಸಂದೇಶ ವೀಡಿಯೋ ಸಂದೇಶವನ್ನು ಕನ್ನಡ ಭಾಷೆಗೂ ವಿಸ್ತರಿಸಿದೆ.

ಸಾರ್ವಜನಿಕರಲ್ಲಿ ವಿಶ್ವಾಸಾರ್ಹ, ಪುರಾವೆ ಆಧಾರಿತ, ಮಾನಸಿಕ, ಆರೋಗ್ಯ, ಮಾರ್ಗದರ್ಶನವನ್ನು ಅಧಿಕೃತ ಧ್ವನಿ ಮೂಲಕ ಲಭ್ಯವಾಗುವಂತೆ ಮಾಡಲು ರಚಿಸಲಾಗಿದೆ. ನಿಮ್ಹಾನ್ಸ್‌ನ ತಜ್ಞರನ್ನೊಳಗೊಂಡ ಈ ಸರಣಿಯು, ಖಿನ್ನತೆ, ಆತಂಕ, ಆಟಿಸಂ, ಟೆಲಿಮನಸ್ ಉಪಕ್ರಮ ಮತ್ತು ಮುಂತಾದ ವಿಷಯಗಳ ಕುರಿತು ಪ್ರಾಯೋಗಿಕವಾಗಿ, ವೈಜ್ಞಾನಿಕ ಆಧಾರಿತ ಮಾಹಿತಿ ನೀಡಲಿದೆ.

****************

ಮನುಷ್ಯನ ಶ್ರೇಷ್ಠತೆಯ ವ್ಯಸನಕ್ಕೆ ತಮ್ಮ ಅನುಭವದ ಮೂಲಕ ಮದ್ದು ಅರೆದವರು ಕೈವಾರ ತಾತಯ್ಯ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅಭಿಪ್ರಾಯಪಟ್ಟಿದ್ದಾರೆ.

ಕೋಲಾರದಲ್ಲಿ ಕೈವಾರ ತಾತಯ್ಯ ಅವರ 300ನೇ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, ಅದ್ಯಾತ್ಮ ಅಂದರೆ ಚರ್ಮಶುದ್ಧಿ ಅಲ್ಲ, ಅಂತರಂಗದ ಶುದ್ದಿ ಎಂದು ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದಲ್ಲಿ ಇಂದು ಯೋಗಿನಾರೇಯಣ ಯತೀಂದ್ರ ಅವರ 300ನೇ ಜಯಂತಿ ನಡೆಯಿತು. ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ ಮಾತನಾಡಿ, ಕೈವಾರ ತಾತಯ್ಯನವರು ಬದುಕಿನ ಮೌಲ್ಯಗಳನ್ನು ಬಿಂಬಿಸುವ ಮೂಲಕ ಉತ್ತಮ ದಾರ್ಶನಿಕರಾಗಿದ್ದರು ಎಂದು ಸ್ಮರಿಸಿದರು.

ಹಾಸನದ ಹಾಸನಾಂಬ ಕಲಾಕ್ಷೇತ್ರದಲ್ಲಿ ಇಂದು ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಯೋಗಿನಾರೇಯಣ ಯತೀಂದ್ರರ ಜಯಂತಿ ನಡೆಯಿತು.

****************

ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲೂಕಿನ ಕೊಯ್ಲದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಪಶುವೈದ್ಯಕೀಯ ಕಾಲೇಜಿನಲ್ಲಿ ಮುಂದಿನ ಶೈಕ್ಷಣಿಕ ವರ್ಷದಿಂದ ತರಗತಿಗಳನ್ನು ಪ್ರಾರಂಭಿಸಲಾಗುವುದು ಎಂದು ಪಶುಸಂಗೋಪನೆ ಸಚಿವ ಕೆ.ವೆಂಕಟೇಶ್ ಹೇಳಿದ್ದಾರೆ.

ಕೊಯ್ಲದ ಪಶುವೈದ್ಯಕೀಯ ಕಾಲೇಜು ಹಾಗೂ ಜಾನುವಾರು ತಳಿ ಸಂವರ್ಧನಾ ಮತ್ತು ತರಬೇತಿ ಕೇಂದ್ರಕ್ಕೆ ಭೇಟಿ ನೀಡಿದ ಅವರು, ಇಲಾಖಾ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಕಾಲೇಜಿಗೆ ಅಗತ್ಯವಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಮಂಜೂರುಗೊಳಿಸಲಾಗಿದೆ. ಈ ನಿಟ್ಟಿನಲ್ಲಿ ಮುಂದಿನ ಶೈಕ್ಷಣಿಕ ವರ್ಷದಿಂದ ಪ್ರಥಮ ವರ್ಷದ ತರಗತಿಗಳನ್ನು ಪ್ರಾರಂಭಿಸಲು ವಿಶೇಷ ಒತ್ತು ನೀಡಲಾಗಿದೆ ಎಂದು ತಿಳಿಸಿದ್ದಾರೆ.

****************

ಸಂಕ್ಷಿಪ್ತ ಸುದ್ದಿಗಳು

- ಗ್ರಾಮೀಣ ನಿವೇಶನ ಯೋಜನೆಯಡಿಯಲ್ಲಿ ನಿವೇಶನ ರಹಿತ ಅರ್ಹ 74 ಫಲಾನುಭವಿಗಳಿಗೆ ಕಾನೂನು ಬದ್ಧವಾಗಿ ನಿವೇಶನ ಹಕ್ಕುಪತ್ರ ನೀಡಲಾಗಿದೆ ಎಂದು ವಿಜಯನಗರ ಶಾಸಕ ಹೆಚ್.ಆರ್. ಗವಿಯಪ್ಪ ತಿಳಿಸಿದ್ದಾರೆ.
- ರಾಜ್ಯ ಸರ್ಕಾರವು ಜನವರಿ 23 ರಂದು ಪ್ರಕಟಿಸಿರುವ ನಾಲ್ಕು ಕಾರ್ಮಿಕ ಸಂಹಿತೆಗಳ ಕರಡು ನಿಯಮಾವಳಿ ವಿರೋಧಿಸಿ ಕೋಲಾರದಲ್ಲಿ ಸಿಐಟಿಯು ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಛೇರಿ ಮುಂದೆ ಪ್ರತಿಭಟನೆ ನಡೆಯಿತು. ಕಾರ್ಮಿಕರ ಸಂಘಟನೆಗಳ ನಾಯಕಿ ವರಲಕ್ಷ್ಮಿ ಮೂಲಕ ಆಯುಕ್ತರಿಗೆ ಆಕ್ಷೇಪಣೆಗಳನ್ನು ಸಲ್ಲಿಸಿದರು.
- ಹಾಸನ ಜಿಲ್ಲೆಯ ಹೊಳೆನರಸೀಪುರ ಪಟ್ಟಣದಲ್ಲಿರುವ ಐತಿಹಾಸಿಕ ಶ್ರೀ ಲಕ್ಷ್ಮಿ ನರಸಿಂಹ ಸ್ವಾಮಿ ಬ್ರಹ್ಮರಥೋತ್ಸವವು ಇಂದು ಅದ್ದೂರಿಯಾಗಿ ಜರುಗಿತು. ಸಂಸದ ಶ್ರೇಯಸ್ ಪಟೇಲ್, ಶಾಸಕರಾದ ಎಚ್ ಡಿ ರೇವಣ್ಣ, ಜಿಲ್ಲಾಧಿಕಾರಿ ಕೆ.ಎಸ್ ಲತಾ ಕುಮಾರಿ ಸೇರಿದಂತೆ ವಿವಿಧ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ರಥೋತ್ಸವಕ್ಕೆ ಚಾಲನೆ ನೀಡಿದರು.
- ಕಳೆದ ಸಾಲಿನಲ್ಲಿ ಮಂಡಿಸಿದ ನಗರಸಭೆ ಆಯವ್ಯಯದಲ್ಲಿ ಘೋಷಣೆ ಮಾಡಿದ ಕಾರ್ಯಕ್ರಮಗಳಲ್ಲಿ ಶೇಕಡಾ 85ರಷ್ಟು ಭರವಸೆಗಳನ್ನು ಈಡೇರಿಸಲಾಗಿದೆ ಎಂದು ನಗರಸಭೆ ಅಧ್ಯಕ್ಷ ಕೆ.ಶೇಷಾದ್ರಿ ತಿಳಿಸಿದ್ದಾರೆ. ರಾಮನಗರದಲ್ಲಿಂದು ಮಾತನಾಡಿದ ಅವರು, ಸ್ವಚ್ಛ ನಗರದ ಕಡೆಗೆ ಒತ್ತು ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

********ಮುಕ್ತಾಯ********